# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

ಸಹಾಯಕ ಕಾರ್ಯಪಾಲಕ ಅಭಿಯಂತರರ ಕಛೇರಿ ಕೃಷ್ಣ ಜಯಂತಿ ನಗರ ವೃತ್ತ ಹೊರಮಾವು/ಕಲ್ಕೆರೆ ಮುಖ್ಯರಸ್ತೆ, ಹೊರಮಾವು ಗ್ರಾಮ, ಬೆಂಗಳೂರು- 560113

ಸಂಖ್ಯೆ:ಬಿಬಿಎಂಪಿ/ಸ.ಕಾ.ಅ/ಹೊಉವಿ/ಪಿಆರ್/ /2021-22 ದಿನಾಂಕ: 03.07.2021

ಮಾನ್ಯ ಆಯುಕ್ತರು ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ರವರ ಕಛೇರಿ ಆದೇಶ ಸಂಖ್ಯೆ:ಬಿ12(5)ಪಿಆರ್/35/2020-21 ದಿನಾಂಕ:21/09/2020 ರ ಆದೇಶದಂತೆ ಹೊರಮಾವು ವಾರ್ಡ್ ಸಂಖ್ಯೆ-25 ರ ನೋಡಲ್ ಅಧಿಕಾರಿಯಾದ ಶ್ರೀಮತಿ.ಸರೋಜಾದೇವಿ ಉಪ ಆಯುಕ್ತರು (ಮಹದೇವಪುರ) ರವರ ಅಧ್ಯಕ್ಷತೆಯಲ್ಲಿ ದಿನಾಂಕ:-03.07.2021 ರಂದು ಬೆಳಗ್ಗೆ 11.00ಗಂಟೆಗೆ ಹೊರಮಾವು ಉಪವಿಭಾಗದ ವಾರ್ಡ್-25 ರ ಕಚೇರಿಯಲ್ಲಿ ಸಭೆಯನ್ನು ಏರ್ಪಡಿಸಲಾಗಿದ್ದು, ಸಭೆಯ ನಡವಳಿಗಳು ಈ ಕೆಳಕಂಡಂತಿರುತ್ತವೆ.

<u>ಉಪಸ್ಥಿತರು:</u>

| ಕ್ರಸಂ | ಹೆಸರು | ಹುದ್ದೆ | ಮೊಬೈಲ್ ಸಂಖ್ಯೆ |
|---|---|---|---|
| | | ಅಧಿಕಾರಿಗಳು | |
| 1 | ಶ್ರೀಮತಿ.ಸರೋಜಾದೇವಿ | ನೋಡಲ್ ಅಧಿಕಾರಿ ವಾ.ನಂ.25 ಹಾಗೂ ಉಪ ಆಯುಕ್ತರು (ಮಹದೇವಪುರ) | 9480684059 |
| 2 | ಶ್ರೀ.ಕೆ.ದೊಡ್ಡ ಶಾಮಣ್ಣ | ಸ.ಕಾ.ಅ (ಹೊರಮಾವು) | |
| 3 | ಶ್ರೀ.ಚಂದ್ರಶೇಖರ್.ಎ.ಜಿ | ಸ.ಕಾ.ಅ (ಹೊರಮಾವು ಉಪ-ವಿಭಾಗ) | |
| 4 | ಶ್ರೀ.ರಮೇಶ್ | ಕಿರಿಯ ಅಭಿಯಂತರರು ವಾರ್ಡ್-25 | 9739838297 |
| 5 | ಶ್ರೀ. ಸಂಜಯ್ ಕುಮಾರ್ | ಹಿರಿಯ ಆರೋಗ್ಯ ಪರಿವೀಕ್ಷಕರು | 9742919411 |
| 6 | ಶ್ರೀ.ತಿರುಮಲ ಪ್ರಸಾದ್ | BWSSB (PMC) | 9591646857 |
| 7 | ಶ್ರೀ.ಕೋದಂಡರಾಮ | ಸ್ಟ್ರೀಟ್ ಲೈಟ್ ಗುತ್ತಿಗೆದಾರರು | |
| 8 | ಶ್ರೀ.ಸುನೀಲ್ ಪ್ರಕಾಶ್ | | 8830833780 |
| 9 | ಶ್ರೀ. ಸದಾನಂದ | | 9448394009 |
| 10 | ಶ್ರೀ.ಪಿ.ವಿ.ದಾಮೋದರನ್ & ಬಿ.ಎನ್.ಆರ್ಮುಗಂ | ಸರ್.ಎಂ.ವಿ ನಗರ ರೆಸಿಡೆನ್ಷಿಯಲ್ ವೆಲ್‌ಫೇರ್ ಅಸೋಸಿಯೇಷನ್ | 9845209947 |
| 11 | ಶ್ರೀ.ತಿರುಮಲ ಪ್ರಸಾದ್ | - | |
| 12 | ಶ್ರೀ.ಸಂಪತ್ ಕುಮಾರ್ | - | |
| 13 | ಶ್ರೀ.ಪ್ರದೀಪ್ | - | |

ಮಾನ್ಯ ನೋಡಲ್ ಅಧಿಕಾರಿ/ಉಪ ಆಯುಕ್ತರು (ಮಹದೇವಪುರ) ರವರ ಸಮ್ಮುಖದಲ್ಲಿ ಸಭೆಗೆ ಹಾಜರಾದ ಎಲ್ಲಾ ಇಲಾಖೆಯ ಅಧಿಕಾರಿ/ಸಿಬ್ಬಂದಿ ಇತರೆ ಸಂಘ ಸಂಸ್ಥೆಗಳು ಸಾರ್ವಜನಿಕರಿಗೆ ಸುಸ್ವಾಗತ ಕೋರುತ್ತಾ, ಬಿಬಿಎಂಪಿ ವಾರ್ಡ್ ನಂ.25 ರ ವ್ಯಾಪ್ತಿಯಲ್ಲಿ ಅಭಿವೃದ್ಧಿ ಕಾರ್ಯ, ಮೂಲಭೂತ ಸೌಕರ್ಯಗಳಾದ ಘನತ್ಯಾಜ್ಯ ವಸ್ತುಗಳ ನಿರ್ವಹಣೆ, ಸಾರ್ವಜನಿಕ ಆರೋಗ್ಯ, ನಗರದ ಸ್ವಚ್ಛತೆ, ರಸ್ತೆ ನಿರ್ವಹಣೆ, ಬೃಹತ್ ನೀರುಗಾಲುವೆಗಳ ನಿರ್ವಹಣೆ, ಬೀದಿ ದೀಪಗಳ ನಿರ್ವಹಣೆ, ಕಲ್ಯಾಣ ಕಾರ್ಯಕ್ರಮಗಳು, 110 ಹಳ್ಳಿಗಳ ವ್ಯಾಪ್ತಿಯಲ್ಲಿ ಬಿಡಬ್ಲ್ಯೂಎಸ್ಎಸ್ಬಿ ರವರು ಕೊಳವೆ ಸಾಲುಗಳ ಅಳವಡಿಸುತ್ತಿರುವ ಸಂಬಂಧ ಹಾಗೂ ಸಾರ್ವಜನಿಕರ ಸಮಸ್ಯೆ ಕುಂದುಕೊರತೆಗಳನ್ನು ಬಗೆಹರಿಸುವಲ್ಲಿ ಅಗತ್ಯ ಕ್ರಮ ಕೈಗೊಳ್ಳಲು ಸಂಬಂಧಪಟ್ಟ ಎಲ್ಲಾ ಇಲಾಖೆಯ ಅಧಿಕಾರಿ ಹಾಗೂ ಸಾರ್ವಜನಿಕರಿಗೆ ಸುಸ್ವಾಗತ ಕೋರಿ ಸಭೆಯನ್ನು ಆರಂಭಿಸಿದರು.

ಮು.ತಿ.ನೋ

ರವರು ಮಾತನಾಡಿ 1ನೇ ಹಾಗೂ 4ನೇ ಕ್ರಾಸ್, ರಾಮಮೂರ್ತಿನಗರ ಬಡಾವಣೆಗಳಲ್ಲಿ ಎರಡು ದಿನಕ್ಕೊಮ್ಮೆ ಕಾವೇರಿ ನೀರು ಬರುತ್ತಿದ್ದು, ಇದರಿಂದ ಸಾರ್ವಜನಿಕರಿಗೆ ನೀರಿನ ಸಮಸ್ಯೆ ಪರಿಹರಿಸಲು ಕಾವೇರಿ ನೀರಿನ ಪೈಪ್‌ಗಳನ್ನು ಅಳವಡಿಸಿಕೊಡಬೇಕೆಂದು ಹಾಗೂ ಕೋರಿರುತ್ತಾರೆ.

ಕ್ರಮ:- ಸಹಾಯಕ ಅಭಿಯಂತರರು, ಸಹಾಯಕ ಕಾರ್ಯಪಾಲಕ ಅಭಿಯಂತರರು, ಹೊರಮಾವು ಉಪ-ವಿಭಾಗ ರವರು ಅಗತ್ಯ ಕ್ರಮವಹಿಸಲು ಸಭೆಯು ಸೂಚಿಸಿತು.

ಶ್ರೀ. ಸಂಪತ್ ಕುಮಾರ್, ಚೇಳಕೆರೆ ಗ್ರಾಮಸ್ಥರು:- ರವರು ಮಾತನಾಡಿ ವಾರ್ಡ್ ಸಂಖ್ಯೆ 25 ರ ಚೇಳಕೆರೆ ಗ್ರಾಮದಲ್ಲಿ ವಾಟರ್‌ಟ್ಯಾಂಕ್ (ಓವರ್‌ಹೆಡ್ ಟ್ಯಾಂಕ್) ಶಿಥಿಲಾವಸ್ಥೆಯಲ್ಲಿದ್ದು, ಸದರಿ ಓವರ್‌ಹೆಡ್ ಟ್ಯಾಂಕ್ ಬೀಳುವ ಸಂಭವವಿದ್ದು, ಇದರಿಂದ ಅಲ್ಲಿನ ಸಾರ್ವಜನಿಕರಿಗೆ ಪ್ರಾಣಾಪಾಯವಾಗುವ ಸಂಭವವಿರುತ್ತದೆ. ಸದರಿ ಟ್ಯಾಂಕ್‌ನ್ನು ತುರ್ತಾಗಿ ಒಡೆದು ಹಾಕಲು ಮತ್ತು ಈ ಸ್ಥಳದಲ್ಲಿ ಹೊಸ ಟ್ಯಾಂಕ್‌ನ್ನು ನಿರ್ಮಾಣ ಮಾಡಿಕೊಡಲು ಕೋರಿಕೊಂಡಿರುತ್ತಾರೆ. ಹಾಗೂ ಪ್ರಿಯಾ ಬಡಾವಣೆ 2ನೇ ಅಡ್ಡರಸ್ತೆಯು ಡೆಡ್‌ಎಂಡ್ ರಸ್ತೆಯಾಗಿದ್ದು, ಮೇಲಿನ ಬಡಾವಣೆಗಳ ನೀರು ಈ ರಸ್ತೆಯಲ್ಲಿ ಹರಿದು ಮುಂದೆ ಸಾಗಬೇಕಾಗಿದ್ದು, ಮತ್ತು ಇದೇ ರಸ್ತೆಯಲ್ಲಿ ಒಳಚರಂಡಿ ಕೊಳವೆ ಸಾಲನ್ನು ಅಳವಡಿಸಬೇಕಾಗಿದ್ದು, ಮುಂದೆ ಸ್ವತ್ತಿನ ಮಾಲೀಕರು ರಾಜಕಾಲುವೆ ಮಾರ್ಗವನ್ನು ಒತ್ತುವರಿ ಮಾಡಿಕೊಂಡಿರುತ್ತಾರೆ. ಮತ್ತು ಚೇಳಕೆರೆ 1ನೇ ಅಡ್ಡರಸ್ತೆ ದೀಪಿಕಾ ಬಡಾವಣೆಯಲ್ಲಿಯೂ ಸಹ ರಾಜಕಾಲುವೆ ಒತ್ತುವರಿಯಾಗಿದ್ದು, ಈ ಎರಡು ರಾಜಕಾಲುವೆಯನ್ನು ಮುಚ್ಚಿರುವುದರಿಂದ ಸರ್ವೆ ಮಾಡಿ ಒತ್ತುವರಿಯನ್ನು ತೆರವುಗೊಳಿಸಲು ಕೋರಿಕೊಂಡಿರುತ್ತಾರೆ. ಹಾಗೂ ಹೊರಮಾವು ಜಯಂತಿ ಗ್ರಾಮದಲ್ಲಿ ಹಾಲಿ ಅಂಬೇಡ್ಕರ್ ಪ್ರತಿಮೆಯಿದ್ದು, ಸದರಿ ಪ್ರತಿಮೆಯು ಶಿಥಿಲಾವಸ್ಥೆಯಲ್ಲಿದ್ದು, ಹೊಸ ಪ್ರತಿಮೆಯನ್ನು ನಿರ್ಮಾಣ ಮಾಡಲು ಮತ್ತು ಈ ಸ್ಥಳವನ್ನು ಅಭಿವೃದ್ಧಿಪಡಿಸಲು ಕೋರಿಕೊಂಡಿರುತ್ತಾರೆ.

ಕ್ರಮ:- ಸಹಾಯಕ ಅಭಿಯಂತರರು, ಸಹಾಯಕ ಕಾರ್ಯಪಾಲಕ ಅಭಿಯಂತರರು, ಬೃಹತ್ ನೀರುಗಾಲುವೆ ವಿಭಾಗ ರವರು ರಾಜಕಾಲುವೆ ಒತ್ತುವರಿ ಮಾರ್ಗವನ್ನು ಗುರುತಿಸಿ ಒತ್ತುವರಿಯನ್ನು ತೆರವುಗೊಳಿಸಲು ಮತ್ತು ಸಹಾಯಕ ಅಭಿಯಂತರರು, ಸಹಾಯಕ ಕಾರ್ಯಪಾಲಕ ಅಭಿಯಂತರರು, ಹೊರಮಾವು ಉಪ-ವಿಭಾಗ ರವರು ತುರ್ತು ಅನುದಾನದಲ್ಲಿ ಓವರ್‌ಹೆಡ್ ಟ್ಯಾಂಕನ್ನು ತೆರವುಗೊಳಿಸಲು ಮತ್ತು ಅಂಬೇಡ್ಕರ್ ಪ್ರತಿಮೆಯನ್ನು ನಿರ್ಮಾಣಮಾಡಲು ಪರಿಶೀಲಿಸಿ ಅಗತ್ಯ ಕ್ರಮವಹಿಸಲು ಸಭೆಯು ಸೂಚಿಸಿತು.

ಶ್ರೀ. ಪ್ರದೀಪ್, ಹೊರಮಾವು ಗ್ರಾಮ:- ರವರು ಮಾತನಾಡಿ ವಾರ್ಡ್ ಸಂಖ್ಯೆ 25 ರ ಹೊರಮಾವು ಗ್ರಾಮದ ಸ್ಮಶಾನಕ್ಕೆ ರಸ್ತೆ, ಗೇಟ್, ಕಾಂಪೌಂಡ್‌ನ್ನು ನಿರ್ಮಾಣ ಮಾಡಿಕೊಡಲು ಈ ಹಿಂದೆ ನಡೆದ ಸಭೆಗಳಲ್ಲಿಯೂ ಸಹ ಚರ್ಚಿಸಲಾಗಿದ್ದು, ಇದರ ಬಗ್ಗೆ ತುರ್ತಾಗಿ ಕ್ರಮ ಕೈಗೊಳ್ಳಲು ಮತ್ತೊಮ್ಮೆ ಕೋರಿಕೊಂಡಿರುತ್ತಾರೆ.

ಕ್ರಮ:- ಸಹಾಯಕ ಅಭಿಯಂತರರು, ಸಹಾಯಕ ಕಾರ್ಯಪಾಲಕ ಅಭಿಯಂತರರು, ಹೊರಮಾವು ಉಪ-ವಿಭಾಗ ರವರು ಅಗತ್ಯ ಕ್ರಮವಹಿಸಲು ಸಭೆಯು ಸೂಚಿಸಿತು.

ಸಭೆಯನ್ನು ಮುಕ್ತಾಯಗೊಳಿಸುವ ಸಲುವಾಗಿ ಕೊನೆಯದಾಗಿ ಸ.ಕಾ.ಅ ಹೊರಮಾವು ಉಪ-ವಿಭಾಗ ರವರು ಸಭೆಯಲ್ಲಿ ಸುರಿತ ಸಲಹೆ ಸೂಚನೆಗಳನ್ನು ಚರ್ಚಿಸಿದ್ದಕ್ಕೆ ಧನ್ಯವಾದಗಳನ್ನು ತಿಳಿಸುತ್ತಾ, ವಾರ್ಡ್‌ನ್ನು ಸಮಗ್ರವಾಗಿ ಅಭಿವೃದ್ಧಿಪಡಿಸುವ ಬಗ್ಗೆ ವಾರ್ಡ್ ಮಟ್ಟದಲ್ಲಿ ಕಾರ್ಯಯೋಜನೆಯನ್ನು ರೂಪಿಸಿಕೊಂಡು ಕ್ರಮವಹಿಸುವುದಾಗಿ ತಿಳಿಸುತ್ತಾ, ವಂದನೆಗಳೊಂದಿಗೆ ನೋಡಲ್ ಅಧಿಕಾರಿಗಳ ಅಪ್ಪಣೆ ಮೇರೆಗೆ ಸಭೆಯನ್ನು ಮುಕ್ತಾಯಗೊಳಿಸಲಾಯಿತು.

3.7.21

ನೋಡಲ್ ಅಧಿಕಾರಿ ವಾರ್ಡ್ ನಂ.25
ಹಾಗೂ ಉಪ ಆಯುಕ್ತರು
ಮಹದೇವಪುರ ವಲಯ
ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

ಕಿರಿಯ ಅಭಿಯಂತರರು
ಹೊರಮಾವು ವಾರ್ಡ್‌ನಂ.25
ಬಿ.ಬಿ.ಎಂ.ಪಿ